ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಪ್ರಕಟಣೆ

ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಏಕಮಾತ್ರ ಕನ್ನಡ ಮಾಸಪತ್ರಿಕೆ

# ಸಹಕಾರ

## ವಾರ್ತಾಪತ್ರಿಕೆ

ಪುಟ: 20
ಬೆಲೆ: ಪ್ರತಿಗೆ ರೂ.25

ಸಂಪುಟ : 1 | ಸಂಚಿಕೆ : 2 | ಅಕ್ಟೋಬರ್ : 2018



ಜಯವೆನ್ನಿ ಶುಭವೆನ್ನಿ ಚಂಡಿಗೆ
ಭಯನಾಶ ಶ್ರೀದೇವಿ ಕಾತ್ಯಯನಿಗೆ
ಸಕಲ ಸೌಭಾಗ್ಯವ ನೀಡೋಳಿಗೆ
ಆರತಿ ಎತ್ತಿರೆ ದುರ್ಗೆಗೆ







## ದಸರಾ ಹಬ್ಬದ ಹಾರ್ದಿಕ ಶುಭಾಷಯಗಳು

ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಆಡಳಿತ ಮಂಡಳಿ ನಿರ್ದೇಶಕರುಗಳು
ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು

# ಕಾಯಕ, ಬಡವರ ಬಂಧು ಯೋಜನೆಗಳ ಅನುಷ್ಠಾನ; ಸೌಲಭ್ಯ ವಂಚಿತ ರೈತರಿಗೆ ಸಾಲ ಸೌಲಭ್ಯ ವಿಸ್ತರಣೆ

### ಸಹಕಾರಿಗಳ,ಅಧಿಕಾರಿಗಳ ಸಭೆಯಲ್ಲಿ ಸಹಕಾರ ಸಚಿವ ಶ್ರೀ ಬಂಡೆಪ್ಪ ಖಾಶೆಂಪೂರ



ಬೆಂಗಳೂರು : ಸಹಕಾರ ಇಲಾಖೆಯ ಮಹತ್ವಾಕಾಂಕ್ಷಿ "ಕಾಯಕ", "ಬಡವರ ಬಂಧು" ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಸಹಕಾರಿಗಳು ಹಾಗೂ ಅಧಿಕಾರಿಗಳು ಸಹಕರಿಸಬೇಕು. ಈ ಯೋಜನೆಗಳ ಮೂಲಕ ಮೀಟರ್ ಬಡ್ಡಿಯಿಂದ ಶೋಷಣೆಗೆ ಒಳಗಾಗುತ್ತಿರುವ ವ್ಯಾಪಾರಿಗಳನ್ನು ರಕ್ಷಿಸಿ, ಮಾಫಿಯಾ ದಂದ-ೆಗೆ ಕಡಿವಾಣ ಹಾಕಬೇಕು ಎಂದು ಸಹಕಾರ ಸಚಿವರಾದ ಶ್ರೀ ಬಂಡೆಪ್ಪ ಖಾಶೆಂಪೂರ ರವರು ಸಲಹೆ ಮಾಡಿದರು.

ದಿನಾಂಕ : 29.9.2018 ರಂದು ಸಾಲ ಮನ್ನಾ ಹಾಗೂ ಇಲಾಖೆಯ ಹೊಸ ಯೋಜನೆಗಳ ಅನುಷ್ಠಾನ ಕುರಿತು ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳ ಅಧ್ಯಕ್ಷರು ಹಾಗೂ ವ್ಯವಸ್ಥಾಪಕ ನಿರ್ದೇಶಕರು, ಅಪೆಕ್ಸ್ ಬ್ಯಾಂಕ್, ಕಾಸ್ಕಾರ್ಡ್ ಬ್ಯಾಂಕಿನ ಅಧ್ಯಕ್ಷರು ಹಾಗೂ ವ್ಯವಸ್ಥಾಪಕ ನಿರ್ದೇಶಕರುಗಳು, ಪ್ರಾಂತೀಯ ಜಂಟಿ ನಿಬಂಧಕರುಗಳು ಹಾಗೂ ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರು, ಕೇಂದ್ರ ಕಛೇರಿಯ ಎಲ್ಲಾ ಶಾಖಾ ಮುಖ್ಯಸ್ಥರುಗಳಿಗೆ ಏರ್ಪಡಿಸಿದ್ದ, ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡುತ್ತಿದ್ದರು.

ಮುಂದುವರೆದು ಮಾತನಾಡಿದ ಅವರು, ರಾಜ್ಯದಲ್ಲಿ ಸುಮಾರು 22 ಲಕ್ಷ ಜನ ರೈತರು ಸಹಕಾರಿ ಕಕ್ಷೆಯೊಳಗೆ ಸಾಲ ಪಡೆದಿದ್ದು, ಸಾಲ ಮನ್ನಾ ಯೋಜನೆಯ ಪ್ರಯೋಜನವನ್ನೂ ಪಡೆದಿದ್ದಾರೆ. ಉಳಿದ ಇನ್ನೂ ಸುಮಾರು 18 ಲಕ್ಷ ಜನ ರೈತರು ಸೌಲಭ್ಯ ವಂಚಿತ ರೈತರಿಗೆ ಸಾಲ ಸೌಲಭ್ಯ ವಿಸ್ತರಣೆಯ ಗುರಿಯನ್ನು ನಾವು ಹೊಂದಿದ್ದೇವೆ. ಇದನ್ನು ಅನುಷ್ಠಾನಕ್ಕೆ ತರಲು ಎಲ್ಲಾ ಸಹಕಾರಿಗಳು ಹಾಗೂ ಅಧಿಕಾರಿಗಳು ಸಹಕರಿಸಬೇಕೆಂದು ತಿಳಿಸಿದರು.

ಕಾಯಕ ಯೋಜನೆಯ ಕುರಿತು ಈಗಾಗಲೇ ಸರ್ಕಾರದಿಂದ ಆದೇಶ ಹೊರಡಿಸಿದ್ದು, ಈ ಯೋಜನೆಯಲ್ಲಿ ಸ್ವಸಹಾಯ ಗುಂಪುಗಳಿಗೆ ರೂ. 10 ಲಕ್ಷದವರೆಗೆ ಸಾಲ ನೀಡುವುದಾಗಿದೆ. ಇದರಲ್ಲಿ ರೂ. 5 ಲಕ್ಷದವರೆಗೆ ಬಡ್ಡಿ ರಹಿತ ಸಾಲ, ಉಳಿದ 5 ಲಕ್ಷ ರೂ.ಗಳಿಗೆ ಶೇಕಡಾ 4 ರಂತೆ ಬಡ್ಡಿ ವಿಧಿಸಲಾಗುವುದು. ಈ ಯೋಜನೆಯಡಿ ಉತ್ಪಾದಿಸಿದ ಉತ್ಪನ್ನಗಳಿಗೆ ಮಾರುಕಟ್ಟೆ ಒದಗಿಸಲು ಎಲ್ಲರೂ ಸಹಕರಿಸಬೇಕು. ಈ ಯೋಜನೆಯಡಿಯಲ್ಲಿ ಮೊದಲ ಹಂತದಲ್ಲಿ 3 ಸಾವಿರ ಜನರಿಗೆ ಅವಕಾಶ ಕಲ್ಪಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

# ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದಿಂದ ಸ್ವಂತ ನಿವೇಶನ ಖರೀದಿ



ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಆಸೆ ಕೊನೆಗೂ ನೆರವೇರಿದೆ. ಸ್ವಂತ ಕಟ್ಟಡ ಹೊಂದುವ ಹಂಬಲ ಹೊಂದಿದ್ದು ಮಹಾಮಂಡಳವು ಬೆಂಗಳೂರಿನ ಪ್ರತಿಷ್ಠಿತ ಯಶವಂತಪುರ ಪ್ರದೇಶದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಇ-ಹರಾಜಿನಲ್ಲಿ ವಿಶಾಲವಾದ ನಿವೇಶನವನ್ನು ತನ್ನದಾಗಿಸಿಕೊಂಡಿದೆ. ದಿನಾಂಕ : 27-09-2018 ರಂದು ನಿವೇಶನವನ್ನು ಜಿಲ್ಲಾ ಅಧಿಕ ಉಪನೋಂದಣಾಧಿಕಾರಿಗಳಾದ ಶ್ರೀ ಶಿವನಂಜಯ್ಯ ಇವರು ನೋಂದಣಿಮಾಡಿ ಶುದ್ದಕ್ರಯ ಪತ್ರವನ್ನು ಮಹಾಮಂಡಳಕ್ಕೆ ಸಲ್ಲಿಸಿದ್ದು, ನಿವೇಶನದ ನೋಂದಣಿ ಸಂದರ್ಭದಲ್ಲಿ ಮಹಾಮಂಡಳದ ಅಧ್ಯಕ್ಷರಾದ ಶ್ರೀ ಸಿ.ಎಂ. ಮಾರೇಗೌಡ, ಉಪಾಧ್ಯಕ್ಷರಾದ ಡಾ॥ ಸಂಜಯ್ ಪಿ. ಹೊಸಮಠ ನಿರ್ದೇಶಕರುಗಳಾದ ಶ್ರೀ ವಿ.ರಾಜು, ಶ್ರೀ ಗುರುರಾಜ್ ಹುಣಸಿಮರದ, ಶ್ರೀ ಎಂ.ಜೆ. ನರೇಂದ್ರ ಕುಮಾರ, ಶ್ರೀ ಡಿ. ಚನ್ನಯ್ಯ, ಶ್ರೀ ಕೆ.ಕೃಷ್ಣಮೂರ್ತಿ, ಶ್ರೀ ಕೆ.ಕೆ. ಮಹೇಂದ್ರಪ್ರಸಾದ್ ಗೌಡ, ಶ್ರೀ ಜಿ. ಮಲ್ಲಿಕಾರ್ಜುನಯ್ಯ, ಶ್ರೀ ತಮ್ಮಣ್ಣ ಬಿ. ಕೆಂಚರಡ್ಡಿ, ಶ್ರೀ ಧರೇಪ್ಪ ಎಂ. ಅಲಗೂರ, ಶ್ರೀ ಗುರುಪಾದಪ್ಪಗೌಡ ಬಿ. ಪಾಟೀಲ್, ಶ್ರೀ ಹೊನ್ನಯ್ಯ ವಿ. ಹಿರೇಮಠ, ಶ್ರೀ ಆಕಾಶ ಪಾಟೀಲ ಹಾಗೂ ಮಹಾಮಂಡಳದ ಸಲಹೆಗಾರರಾದ ಶ್ರೀ ಕೆ.ಎಸ್. ಗುರುಪ್ರಸಾದ್ ಮತ್ತು ಪ್ರಭಾರ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀಮತಿ ಪಿ. ಆಶಾಲತಾ ಮತ್ತಿತರರು ಉಪಸ್ಥಿತರಿದ್ದರು.

# ಇ–ಸ್ಟಾಂಪಿಂಗ್ ವಿತರಣಾ ಕೇಂದ್ರದ ಉದ್ಘಾಟನೆ



ಬೆಂಗಳೂರು ನಗರದ ಕೋರಮಂಗಲ ಬಿ.ಡಿ.ಎ ಸಂಕೀರ್ಣದಲ್ಲಿ ಮಹಾಮಂಡಳದ ಸದಸ್ಯ ಸಹಕಾರ ಸಂಘವಾದ ಶ್ರೀ ರೇಣುಕಾ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿಯ ಇ–ಸ್ಟಾಂಪಿಂಗ್ ಉಪವಿತರಣ ಕೇಂದ್ರದ ಉದ್ಘಾಟನೆಯನ್ನು ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ನಿರ್ದೇಶಕರುಗಳಾದ ಶ್ರೀ ಡಿ. ಚನ್ನಯ್ಯ ಮತ್ತು ಶ್ರೀ ಕೆ.ಕೆ. ಮಹೇಂದ್ರಪ್ರಸಾದ್ ಗೌಡ ಇವರುಗಳು ನೆರವೇರಿಸಿದರು. ಈ ಸಂದರ್ಭದಲ್ಲಿ ಮಹಾಮಂಡಳದ ಮಾಜಿ ನಿರ್ದೇಶಕರಾದ ಶ್ರೀ ಜಯರಾಮಾಚಾರಿ ಹಾಗೂ ಸಂಘದ ಅಧ್ಯಕ್ಷರಾದ ಶ್ರೀ ರಾಮಸ್ವಾಮಿ, ಸಂಘದ ನಿರ್ದೇಶಕರುಗಳು ಹಾಗೂ ಸಿಬ್ಬಂದಿವರ್ಗದವರು ಉಪಸ್ಥಿತರಿದ್ದರು.

## ಜಾಹಿರಾತು ಮನವಿ




ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳವು ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಪೂರಕವಾಗಿ ಮಾಸಿಕ ಸಹಕಾರ ಪತ್ರಿಕೆಯನ್ನು ಪ್ರಕಟ ಮಾಡುತ್ತಿದ್ದು, ಪತ್ತಿನ ಸಹಕಾರ ಚಳವಳಿಯ ಪೂರಕ ಚಟುವಟಿಕೆಗಳಿಗೆ ಪ್ರಚಾರ ನೀಡುತ್ತಾ ಬರುತ್ತಿದೆ.

ರಾಜ್ಯದ ಪತ್ತಿನ ಸಹಕಾರ ಸಂಘಗಳು ತಮ್ಮ ಕಾರ್ಯಪ್ರಗತಿಯ ವಿವರಗಳನ್ನು ಜಾಹಿರಾತು ಮೂಲಕ ಪ್ರಕಟಿಸಿದ್ದಲ್ಲಿ ಉತ್ತಮ ಪ್ರಚಾರ ಪಡೆದುಕೊಳ್ಳಲು ಸಾಧ್ಯವಿದೆ. ಈ ನಿಟ್ಟಿನಲ್ಲಿ ಪತ್ತಿನ ಸಹಕಾರ ಸಂಘಗಳ ಮಹಾಮಂಡಳವು ರಿಯಾಯಿತಿ ದರದಲ್ಲಿ ಜಾಹಿರಾತುಗಳನ್ನು ಪ್ರಕಟಿಸಲು ಉತ್ಸುಕವಾಗಿದೆ. ಸಹಕಾರ ಸಂಸ್ಥೆಗಳು ಸಂಪೂರ್ಣ ಮಾಹಿತಿಗಳೊಂದಿಗೆ ಜಾಹಿರಾತುಗಳನ್ನು ನೀಡಲು ಕೋರಿದೆ. ಜಾಹಿರಾತು ದರಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ದೂರವಾಣಿ ಹಾಗೂ ಮೊಬೈಲ್ ಸಂಖ್ಯೆಗಳಿಗೆ ಸಂಪರ್ಕಿಸಲು ಕೋರಿದೆ.

ಮೊಬೈಲ್ ನಂ. 9986836884, ದೂರವಾಣಿ : 080 23564444, 23464033, 23464034

ಇ–ಮೇಲ್ : ksccsfltd@gmail.com, info@ksccsf.org, ವೆಬ್‌ಸೈಟ್ : www.ksccsf.org

## ಸಹಕಾರ ವಾರ್ತಾ ಪತ್ರಿಕೆಗೆ ಚಂದಾದಾರರಾಗಲು ಮನವಿ

ಕರ್ನಾಟಕ ಸಹಕಾರ ಪತ್ತಿನ ಸಂಘಗಳ ಮಹಾಮಂಡಳವು ಪ್ರಕಟಿಸುತ್ತಿರುವ ಮಾಸಿಕ ಸಹಕಾರ ವಾರ್ತಾ ಪತ್ರಿಕೆಗೆ ಈಗಾಗಲೇ ಚಂದಾದಾರರಾಗಿರುವ ಸದಸ್ಯ ಸಹಕಾರ ಸಂಘಗಳನ್ನು ಹೊರತುಪಡಿಸಿ ಇನ್ನುಳಿದ ಪತ್ತಿನ ಸಹಕಾರ ಸಂಘಗಳು "ಸಹಕಾರ ಮಾಸಿಕ ವಾರ್ತಾ ಪತ್ರಿಕೆ"ಗೆ ಚಂದಾದಾರರಾಗಲು ಈ ಮೂಲಕ ಮನವಿ ಮಾಡಲಾಗಿದೆ.

– ಸಂಪಾದಕರು

SAHAKARA VARTHA PATHRIKE
RNI Regn. No.KARKAN 2018/75796
BENGALURU NORTH



ಶ್ರೀ ಸಿ.ಎಂ. ಮಾರೇಗೌಡ
ಅಧ್ಯಕ್ಷರು

# ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು

## ಆಡಳಿತ ಮಂಡಳಿ



ಡಾ. ಸಂಜಯ್ ಪಿ. ಹೊಸಮಠ
ಉಪಾಧ್ಯಕ್ಷರು



ಶ್ರೀ ವಿ. ರಾಜು



ಶ್ರೀ ಶಿವರಾಜ್ ಬಿ. ಪಾಟೀಲ್



ಶ್ರೀ ಬಿ.ಡಿ. ಭೂಕಾಂತ್



ಶ್ರೀ ಗುರುರಾಜ್ ಹುಣಸಿಮರದ



ಶ್ರೀ ಎಂ.ಜೆ. ನರೇಂದ್ರ ಕುಮಾರ



ಶ್ರೀ ಕೆ.ಎಲ್. ಶಿವರಾಮು



ಶ್ರೀಮತಿ ಕೆ. ಲಲಿತ



ಶ್ರೀ ಡಿ. ಚನ್ನಯ್ಯ



ಶ್ರೀ ಕೆ. ಕೃಷ್ಣಮೂರ್ತಿ



ಶ್ರೀ ಎನ್.ಬಿ. ರವೀಶಯ್ಯ



ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡ



ಶ್ರೀ ಜಿ. ಮಲ್ಲಿಕಾರ್ಜುನಯ್ಯ



ಶ್ರೀ ತಮ್ಮಣ್ಣ ಬಿ. ಕೆಂಚರೆಡ್ಡಿ



ಶ್ರೀ ಧರೇಪ್ಪ ಎಂ. ಆಲಗೂರ



ಶ್ರೀ ಗುರುಪಾದಪ್ಪಗೌಡ ಬ. ಪಾಟೀಲ



ಶ್ರೀ ಹೊನ್ನಯ್ಯ ವಿ. ಹಿರೇಮಠ



ಶ್ರೀ ಆಕಾಶ ಪಾಟೀಲ



ಶ್ರೀ ಪಿ.ಕೆ. ಜಯಕೃಷ್ಣಗೌಡ



ಕೆ. ನಾರಾಯಣ



ಶ್ರೀ ಕೆ.ಎಸ್. ಗುರುಪ್ರಸಾದ್
ಸಲಹೆಗಾರರು



ಶ್ರೀಮತಿ ಆಶಾಲತಾ ಪಿ.
ಮುಖ್ಯಕಾರ್ಯನಿರ್ವಹಣಾಧಿಕಾರಿ (ಪ್ರಭಾರ)

ಇಂದ : ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು
ನಂ.16, 1ನೇ ಮಹಡಿ, 1ನೇ ಅಡ್ಡರಸ್ತೆ, ಲಿಂಕ್ ರಸ್ತೆ, ಮಲ್ಲೇಶ್ವರಂ, ಬೆಂಗಳೂರು–560003

Printed at : Biligiri Printers
Chamrajpet, Bengaluru - 18.